5

**ಶ್ರೀ ತಿಪ್ಪಣ್ಣಪ್ಪ ಕಮಕನೂರ ಮಾನ್ಯ ವಿಧಾನ ಪರಿಷತ್ತು ಸದಸ್ಯರು, ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ಸೂಚನೆ** " ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮಗಳು, ಮಂಡಳಿಗಳು, ವಿಶ್ವವಿದ್ಯಾಲಯಗಳು, ಸಹಕಾರ ಸಂಸ್ಥೆಗಳು ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವ ಬಗೆ, ವಿಜಯವಾಣಿ ಪತ್ರಿಕೆಯಲ್ಲಿ ವರದಿ ಪ್ರಕಟವಾಗಿರುತ್ತದೆ.

ರಾಜ್ಯಸರ್ಕಾರದಲ್ಲಿ 2025ರ ಜನವರಿ 24ರವರೆಗೆ ವಿವಿಧ ಇಲಾಖೆಗಳಲ್ಲಿ 916 ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇದ್ದು, ಈ ಪೈಕಿ, ಉನ್ನತ ಶಿಕ್ಷಣ ಇಲಾಖೆಯಲ್ಲಿ ಅತೀ ಹೆಚ್ಚು 530, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ 185, ಜಲಸಂಪನ್ಮೂಲ ಇಲಾಖೆಯಲ್ಲಿ 112 ಹುದ್ದೆಗಳು ಖಾಲಿ ಇರುತ್ತವೆ. ಬ್ಯಾಕ್‌ಲಾಗ್ ಹುದ್ದೆಗಳನ್ನು ಆರು ತಿಂಗಳ ಒಳಗೆ ಭರ್ತಿ ಮಾಡುವಂತೆ ಹೈಕೋರ್ಟ್ ಆದೇಶ ಸಹ ನೀಡಿತ್ತು. ಆದರೆ ಬಹುತೇಕ ಇಲಾಖೆಗಳು ಯಾವುದೇ ಕ್ರಮ ತೆಗೆದುಕೊಂಡಿಲ್ಲದಿರುವುದು ತಿಳಿದುಬಂದಿರುತ್ತದೆ. ಪರಿಣಾಮ 2024ರ ಮಾರ್ಚ್ 26ರಂದ ನ್ಯಾಯಾಂಗ ನಿಂದನಾ ಅರ್ಜಿ ದಾಖಲಾಗಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ.

ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆ ಸಹಮತದ ಅವಶ್ಯಕತೆ ಇರುವುದಿಲ್ಲ. ಈ ಹುದ್ದೆಗಳನ್ನು ಸಾಮಾನ್ಯ ಹುದ್ದೆಗಳೊಂದಿಗೆ ಸೇರಿಸಿ ನೇಮಕಾತಿ ಅಧಿಸೂಚನೆ ಹೊರಡಿಸಲು ಸಹ ಅವಕಾಶ ಇಲ್ಲ. ಪ್ರತ್ಯೇಕ ಅಧಿಸೂಚನೆ ಹೊರಡಿಸಬೇಕೆಂದು ನಿರ್ದೇಶಗಳಿವೆ. ಆದರೆ ಈ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಲೇ ಬರುತ್ತಿದೆ. ಇನ್ನು ಮುಂಬಡ್ತಿಯಲ್ಲೂ ಪರಿಶಿಷ್ಟ ಜಾತಿಗೆ ಶೇಕಡ 17, ಪರಿಶಿಷ್ಟ ಪಂಗಡಕ್ಕೆ ಶೇ.7 ಮೀಸಲಾತಿ ನೀಡಬೇಕಿದ್ದು, ಡಿಪಿಎಆರ್ 1999ರ ಫೆಬ್ರುವರಿ 3 ಮತ್ತು ಏಪ್ರಿಲ್ 13ರಂದು ಹೊರಡಿಸಿದ್ದ ಸರ್ಕಾರಿ ಆದೇಶಗಳನ್ನು ಹಿಂಪಡೆಯಬೇಕು. ಈ ಆದೇಶಗಳಿಂದ ಮುಂಬಡ್ತಿ ವಂಚಿತರಾದವರಿಗೆ ವಂಚಿತರಾದ ದಿನಾಂಕದಿಂದಲೇ ಮುಂಬಡ್ತಿಗೆ ಪರಿಗಣಿಸಬೇಕಾಗಿದೆ. ಅಲ್ಲದೆ, ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ 2001ರ ಪೂರ್ವ ಮತ್ತು ನಂತರದ ಹುದ್ದೆಗಳಿಗೂ ಈ ನಿಯಮಗಳನ್ನು ಅನ್ವಯಿಸಬೇಕಾಗಿದೆ.

ಸರ್ಕಾರ ಸಹ ಈ ಎಲ್ಲ ವಿಚಾರಗಳನ್ನು ಮನಗಂಡಿದ್ದು ಸಚಿವಸಂಪುಟ ಉಪ ಸಮಿತಿ ಅಗತ್ಯ ತಿದ್ದುಪಡಿ ತರಲು ಮುಂದಾಗಿರುವುದು ಸಮಾಧಾನಕರ ಸಂಗತಿಯಾಗಿದ್ದು, ಈ ವಿಚಾರದಲ್ಲಿ ಹೆಚ್ಚಿನ ಮುತುವರ್ಜಿ ವಹಿಸಿ ಬ್ಯಾಕ್‌ಲಾಗ್ ಹುದ್ದೆಗಳು ಯಾವುದೇ ವಿಳಂಬವಿಲ್ಲದಂತೆ ಭರ್ತಿಯಾಗುವಂತೆ ಅಗತ್ಯ ಕ್ರಮ ಕೈಗೊಂಡು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅಭ್ಯರ್ಥಿಗಳು ಹಾಗೂ ನೌಕರರಿಗೆ ಅನುಕೂಲ ಮಾಡಿಕೊಬೇಕೆಂದು ಶೂನ್ಯವೇಳೆಯಲ್ಲಿ ಮಾನ್ಯ ಸಮಾಜ

****

**ಉತ್ತರ:-**

ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧವಾಗಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು 6 ಜನ ಮಾನ್ಯ ಇತರೆ ಸಚಿವರುಗಳು ಸೇರಿದಂತೆ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಉಪ ಸಮಿತಿಯು ಹಲವಾರು

ಬಾರಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಕಾಲಕಾಲಕ್ಕೆ ಸಭೆಗಳನ್ನು ನಡೆಸಿ, ನಿರ್ದೇಶನ ನೀಡಲಾಗುತ್ತಿದೆ.

ಸಮಾಜ ಕಲ್ಯಾಣ ಇಲಾಖೆಯಿಂದ ದಿನಾಂಕ:28.11.2023, 16.01.2024, 10.02.2024, 19.02.2024, 25.03.2024, 12.08.2024 ಮತ್ತು ದಿನಾಂಕ:-26.08.2024 ರಲ್ಲಿ ಎಲ್ಲಾ ಇಲಾಖೆಗಳಿಗೆ ಪತ್ರ ಬರೆದು ಪ್ರಥಮ ಆದ್ಯತೆಯ ಮೇರೆಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಂತೆ ನಿರ್ದೇಶನ ನೀಡಲಾಗಿರುತ್ತದೆ.

ಇತ್ತೀಚೆಗೆ ದಿನಾಂಕ: 24-01-2025 ರಂದು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಬ್ಯಾಕ್‌ಲಾಗ್ ಸಚಿವ ಸಂಪುಟ ಉಪ ಸಮಿತಿ ಸಭೆಯನ್ನು ನಡೆಸಲಾಗಿದೆ. ಈ ಕೆಳಕಂಡ ವಿವಿಧ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ-531 ಮತ್ತು ಪರಿಶಿಷ್ಟ ಪಂಗಡ-385 ಸೇರಿದಂತೆ ಬಾಕಿ ಇರುವ **ಒಟ್ಟು 916 ಬ್ಯಾಕ್‌ಲಾಗ್ ಹುದ್ದೆಗಳನ್ನು** ಭರ್ತಿ ಮಾಡಲು ಸದರಿ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿದೆ.

| **ಕ್ರ ಸಂ** | **ಇಲಾಖೆ / ನಿಗಮ / ಮಂಡಳಿ / ವಿಶ್ವವಿದ್ಯಾಲಯ / ಸಹಕಾರ ಸಂಸ್ಥೆಗಳು / ಇತ್ಯಾದಿ** | **ಭರ್ತಿ ಮಾಡಲು ಬಾಕಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ** | | |
|---|---|---|---|---|
| | | **ಪ.ಜಾತಿ** | **ಪ.ವರ್ಗ** | **ಒಟ್ಟು** |
| 1 | ಉನ್ನತ ಶಿಕ್ಷಣ ಇಲಾಖೆ | 254 | 276 | 530 |
| 2 | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ | 115 | 70 | 185 |
| 3 | ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ | 0 | 1 | 1 |
| 4 | ಜಲಸಂಪನ್ಮೂಲ ಇಲಾಖೆ | 112 | 0 | 112 |
| 5 | ಸಾರಿಗೆ ಇಲಾಖೆ | 6 | 4 | 10 |
| 6 | ಕೃಷಿ ಇಲಾಖೆ | 6 | 5 | 11 |
| 7 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 9 | 12 | 21 |
| 8 | ನಗರಾಭಿವೃದ್ಧಿ ಇಲಾಖೆ | 5 | 2 | 7 |
| 9 | ವೈದ್ಯಕೀಯ ಶಿಕ್ಷಣ ಇಲಾಖೆ | 1 | 7 | 8 |
| 10 | ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ | 10 | 1 | 11 |
| 11 | ಅರಣ್ಯ ಇಲಾಖೆ | 0 | 1 | 1 |
| 12 | ತೋಟಗಾರಿಕೆ ಇಲಾಖೆ | 5 | 0 | 5 |
| 13 | ಕನ್ನಡ ಮತ್ತು ಸಂಸ್ಕೃತಿ ಇಲಾಖೆ | 4 | 2 | 6 |
| 14 | ಒಳಾಡಳಿತ ಇಲಾಖೆ | 1 | 3 | 4 |
| 15 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | 2 | 0 | 2 |
| 16 | ಕಂದಾಯ ಇಲಾಖೆ | 0 | 1 | 1 |
| 17 | ರೇಷ್ಮೆ ಇಲಾಖೆ | 1 | 0 | 1 |
| | **ಒಟ್ಟು** | **531** | **385** | **916** |

ಮುಂಬಡ್ತಿಯಲ್ಲಿಯೂ ಸಹ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡವ ಬಗ್ಗೆ ದಿನಾಂಕ: 24-01-2025 ರಂದು ನಡೆದ ಸಚಿವ ಸಂಪುಟದ ಬ್ಯಾಕ್‌ಲಾಗ್ ಉಪ ಸಮಿತಿ ಸಭೆಯಲ್ಲಿ ಸೂಚಿಸಲಾಗಿರುತ್ತದೆ. ಈ ಹಿಂದೆ ಮುಂಬಡ್ತಿಗೆ ಸಂಬಂಧಿಸಿದಂತೆ

ದಿನಾಂಕ:13-04-1999 ರಲ್ಲಿ ನೀಡಿರುವ ಆದೇಶವನ್ನೂ ಸಹ ಹಿಂಪಡೆಯುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಪತ್ರ ಮುಖೇನ ತಿಳಿಸಲಾಗಿದೆ.

ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು 2001ರಲ್ಲಿ ಸಿಆಸು ಇಲಾಖೆಯಿಂದ ಬ್ಯಾಕ್‌ಲಾಗ್ ನಿಯಮಗಳನ್ನು ರೂಪಿಸಲಾಗಿದ್ದು, ಸದರಿ ನಿಯಮಗಳಂತೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಆದರೆ, ಈ ಹಿಂದೆ, ಸದರಿ ನಿಯಮಗಳಿಗೆ ತಿದ್ದುಪಡಿ ಮಾಡಿ 2004ರವರೆಗೆ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನು 2001ರ ನಿಯಮಗಳಂತೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. 2004ರ ನಂತರ ಗುರುತಿಸಲಾದ ಹುದ್ದೆಗಳಿಗೂ ಸಹ ಸದರಿ ನಿಯಮಗಳು ಅನ್ವಯಿಸುವ ಬಗ್ಗೆ ಅಗತ್ಯ ತಿದ್ದುಪಡಿಗಳನ್ನೂ ಸಹ ಕೈಗೆತ್ತಿಕೊಳ್ಳಲು ಸದರಿ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಈ ಮಧ್ಯೆ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ (ಉಪ ವರ್ಗೀಕರಣ) ಬಗ್ಗೆ ಅಂತಿಮ ನಿರ್ಣಯ ತೆಗೆದುಕೊಳ್ಳುವವರೆಗೆ ಹೊಸದಾಗಿ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸಬಾರದೆಂದು ಸಚಿವ ಸಂಪುಟದಿಂದ ಆದೇಶವಾಗಿರುತ್ತದೆ. ಆದರೆ, ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹೊಸದಾಗಿ ಅಧಿಸೂಚನೆ ಮಾಡಬಹುದೇ ಅಥವಾ ಇಲ್ಲವೇ ಎಂಬುದರ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಮೇಲ್ಕಂಡ ಎಲ್ಲಾ ವಿಷಯಗಳನ್ನು ಗಣನೆಗೆ ತೆಗೆದುಕೊಂಡು ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.

**ಕಡತ ಸಂಖ್ಯೆ: SWD/195/SLP/2025**

(**ಡಾ||ಹೆಚ್.ಸಿ.ಮಹದೇವಪ್ಪ**)
ಸಮಾಜ ಕಲ್ಯಾಣ ಸಚಿವರು.